**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯ, ದಾವಣಗೆರೆ.**

**Spl.C.NDPS.8/2021**

| | | |
|---|---|---|
| ಸಾಕ್ಷಿದಾರರ ಹೆಸರು | : | ಮೇಘರಾಜ ಎಂ. ವಿ. |
| ತಂದೆಯ ಹೆಸರು | : | ವಾಸುದೇವ |
| ವಯಸ್ಸು | : | 39 ವರ್ಷ |
| ಉದ್ಯೋಗ | : | ಪೊಲೀಸ್ ಇನ್ಸಪೆಕ್ಟರ್, ಡಿಸಿಆರ್.ಇ. ದಾವಣಗೆರೆ |
| ವಾಸ ಸ್ಥಳ | : | ದಾವಣಗೆರೆ |

ಪಿ.ಡಬ್ಲ್ಯೂ 12

CW :ಹೆಚ್ಚುವರಿ ಸಾಕ್ಷಿ

ದಿ: 26-02-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದ (ಸತೀಶ್ )**:

1. ಡಿಸೆಂಬರ್ 2020 ರಿಂದ ಡಿಸೆಂಬರ್ 2021 ರವರೆಗೆ ನಾನು ದಾವಣಗೆರೆಯ CEN ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿದ್ದೇನೆ. ಈ ಪ್ರಕರಣದಲ್ಲಿ PF.25/2021 ದಿಃ 05-04-2021 ರಲ್ಲಿ ಕ್ರಮ ಸಂಖ್ಯೆ 1 ರಿಂದ 4 ರಲ್ಲಿ ಬರೆದಿರುವ ವಸ್ತುಗಳ sample ಗಳನ್ನು ದಿಃ 08-04-2021 ರಂದು FSL ಮಡಿವಾಳ, ಬೆಂಗಳೂರು ಇವರಿಗೆ ಕಳುಹಿಸಿದ್ದು, ನಂತರ ಸದರಿಯವರಿಂದ ಬಂದಂತಹ ವರದಿಯನ್ನು ಸ್ವೀಕರಿಸಿ ಪ್ರಕರಣಕ್ಕೆ ಅಳವಡಿಸಿಕೊಂಡಿದ್ದೇನೆ. ಸಿಬ್ಬಂದಿ ಸಿ.ಪಿ.ಸಿ. 116 ನಾಗರಾಜರವರ ಮೂಲಕ ನ್ಯಾಯಾಲಯಕ್ಕೆ ಕಳುಹಿಸಿ ಸ್ವೀಕೃತಿ ಪತ್ರವನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ದಾಖಲೆಯನ್ನು ಈಗಾಗಲೇ ನಿಪಿ-41 ಅಂತ ಗುರುತಿಸಲಾಗಿದೆ.

**<u>ಪಾಟೀ ಸವಾಲುಃ ಶ್ರೀ ಕೆ.ಕೆ.(ಎಲ್.ಎ.ಡಿ.ಸಿ)., ವಕೀಲರಿಂದ ಆರೋಪಿತರ ಪರವಾಗಿ</u>**:

2. ಈಗ ನನಗೆ ತೋರಿಸಿದ ನಿಪಿ-41 ರಲ್ಲಿ Reference ದಿಃ 06-04-2021 ಅಂತ ಇರುತ್ತದೆ ಅಂದರೆ ನಿಜ. RFSL ಮಡಿವಾಳರವರು ದಿಃ 06-05-2021 ರಂದು ಸ್ವೀಕರಿಸಿದ ದಿನಾಂಕ ಇದೆ ಅಂದರೆ ನಿಜ. ಕೋರಿಕೆಯ ಪತ್ರದ ಮೇರೆಗೆ ಸುಳ್ಳು ವರದಿಯನ್ನು ಪಡೆದುಕೊಂಡಿದ್ದೇನೆ ಅಂದರೆ ಸರಿಯಲ್ಲ. Chain of custody form ನ್ನು ನಾನು ಪಡೆದುಕೊಂಡಿಲ್ಲ. ಸಾಕ್ಷಿದಾರರು ಹೇಳುತ್ತಾರೆ ವರದಿಯನ್ನು ಮಾತ್ರ ಪಡೆದುಕೊಂಡಿದ್ದೇನೆ.

**<u>ಮರುವಿಚಾರಣೆಃ</u>** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓದಿ, ಹೇಳಿ, ಕೇಳಿ, ಸರಿ ಇದೆ.

Sd/-

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದಾವಣಗೆರೆ.